KARN010004482026

| | | |
|---|---|---|
| Presented on | : | 26-02-2026 |
| Registered on | : | 27-02-2026 |
| Decided on | : | 23-03-2026 |
| Duration | : | 25 days |

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ.

:ಉಪಸ್ಥಿತರು:

M H ANNAYYANAVAR

Digitally signed by M H ANNAYYANAVAR
Date: 2026.03.23 13:14:37 +0530

ಶ್ರೀಯುತ ಎಂ.ಹೆಚ್. ಅಣ್ಣಯ್ಯನವರ, ಬಿಕಾಂ.ಎಲ್.ಎಲ್.ಬಿ. (ವಿಶೇಷ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಮನಗರ.

**ದಿನಾಂಕ 23 ನೇ ಮಾರ್ಚ್ ಮಾಹೆ 2026**

**ಕ್ರಿಮಿನಲ್ ಮಿಸಲೇನಿಯಸ್ ಸಂಖ್ಯೆ 142/2026**

ಅರ್ಜಿದಾರರು : ಶ್ರೀ ಮಹಾಲಿಂಗಯ್ಯ.ಟಿ.ವಿ.,
ಆರೋಪಿ
ಬಿನ್ ವೆಂಕಟಪ್ಪ,
ವಯಸ್ಸು 34 ವರ್ಷ.
ಹಾಲಿ ವಾಸಃ ತೊಕಸಂದ್ರ ಗ್ರಾಮ, ಮರಳವಾಡಿ ಹೋಬಳಿ,
ಹಾರೋಹಳ್ಳಿ ತಾಲ್ಲೂಕು,
ಬೆಂಗಳೂರು ದಕ್ಷಿಣ ಜಿಲ್ಲೆ.
**(ಪರವಾಗಿ ಶ್ರೀ ಆರ್.ಶಿವಕುಮಾರ, ವಕೀಲರು)**

- ವಿರುದ್ಧ -

ಎದುರುದಾರರು : ಸರ್ಕಾರದ ಪರವಾಗಿ ಹಾರೋಹಳ್ಳಿಪೊಲೀಸ್ ಠಾಣೆ,
ಬೆಂಗಳೂರು ದಕ್ಷಿಣ ಜಿಲ್ಲೆ.
**(ಪರವಾಗಿ ಸರ್ಕಾರಿ ಅಭಿಯೋಜಕರು)**

*****

<u>ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ **483** ರಡಿ ಜಾಮೀನು ಅರ್ಜಿಯ ಮೇಲೆ ಆದೇಶ</u>

ಅರ್ಜಿದಾರರ ಪರ ವಕೀಲರು ಮಾನ್ಯ ನ್ಯಾಯಾಲಯದಲ್ಲಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ 483 ರ ಅಡಿಯಲ್ಲಿ ಜಾಮೀನು ಅರ್ಜಿಯನ್ನು ಸಲ್ಲಿಸಿ, ಹಾರೋಹಳ್ಳಿ ಪೋಲೀಸ್ ಠಾಣಾಧಿಕಾರಿಯವರು ಅರ್ಜಿದಾರ ಯಾವುದೇ ರೀತಿಯ ಅಪರಾಧ ಮಾಡಿಲ್ಲದಿದ್ದರೂ ಸಹಿತ ಅರ್ಜಿದಾರರ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿದ್ದು, ಅರ್ಜಿದಾರರು ನ್ಯಾಯಾಲಯಕ್ಕೆ ಸೂಕ್ತ ಜಾಮೀನು ನೀಡಲು ತಯಾರಿದ್ದು ಹಾಗೂ ನ್ಯಾಯಾಲಯ ವಿಧಿಸುವ ಷರತ್ತುಗಳನ್ನು ಪಾಲಿಸಲು ತಯಾರಿರುತ್ತಾರೆಂದು, ಆದ್ದರಿಂದ ಅರ್ಜಿದಾರ ಸಲ್ಲಿಸಿರುವ ಜಾಮೀನು ಅರ್ಜಿಯನ್ನು ಮಂಜೂರು ಮಾಡಬೇಕೆಂದು ವಿನಂತಿಸಿಕೊಂಡಿರುತ್ತಾರೆ.

2. ಸದರಿ ಅರ್ಜಿಗೆ ಸರಕಾರಿ ಅಭಿಯೋಜಕರು ತಕರಾರು ಸಲ್ಲಿಸಿ, ಅರ್ಜಿದಾರರ ಮೇಲೆ ಇರತಕ್ಕಂತಹ ಆಪಾದನೆ ಜಾಮೀನು ರಹಿತವಾದಂತಹ ಆಪಾದನೆಯಾಗಿರುತ್ತದೆ. ಅರ್ಜಿದಾರರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಿದಲ್ಲಿ ಪುನಃ ಇಂತಹದೇ ಕೃತ್ಯ ಎಸಗುವ ಸಾಧ್ಯತೆ ಇರುತ್ತದೆ ಹಾಗೂ ತನಿಖೆಗೆ ಸಹಕರಿಸದೇ ಸಾಕ್ಷ್ಯಾಧಾರಗಳನ್ನು ನಾಶಪಡಿಸುವ, ಸಾಕ್ಷಿದಾರರಿಗೆ ಬೆದರಿಸುವ ತನಿಖೆಗೆ ಅಡ್ಡಿವುಂಟು ಮಾಡುವ ಸಾಧ್ಯತೆ ಇರುತ್ತದೆ ಎಂದು, ಈ ಮೇಲ್ಕಂಡ ಕಾರಣಗಳಿಂದಾಗಿ ಜಾಮೀನು ಅರ್ಜಿಯನ್ನು ತಿರಸ್ಕರಿಸಬೇಕೆಂದು ಕೇಳಿಕೊಂಡಿದ್ದಾರೆ.

3. ಅರ್ಜಿ, ತಕರಾರು ಹಾಗೂ ಉಭಯ ವಕೀಲರ ವಾದ ವಿವಾದವನ್ನು ಪರಿಶೀಲಿಸಲಾಗಿ, ಮಾನ್ಯ ನ್ಯಾಯಾಲಯಕ್ಕೆ ಈ ಕೆಳಕಂಡ ಅಂಶಗಳು ಚರ್ಚೆಗೆ ಬಂದಿರುತ್ತವೆಃ-

1. ಅರ್ಜಿದಾರರ ಪರ ವಕೀಲರು ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ 483 ರಡಿ ಸಲ್ಲಿಸಿದ ಜಾಮೀನು ಅರ್ಜಿಯನ್ನು ಪುರಸ್ಕರಿಸಬಹುದೇ ?

2. ಯಾವ ಆದೇಶ ?

4. ಮೇಲ್ಕಂಡ ಅಂಶಗಳಿಗೆ ನನ್ನ ಉತ್ತರ ಈ ಕೆಳಕಂಡಂತೆ ಇರುತ್ತದೆ.

ಅಂಶ ನಂ.1 : ಸಕಾರಾತ್ಮಕವಾಗಿ

ಅಂಶ ನಂ.2 : ಅಂತಿಮ ಆದೇಶದಂತೆ ಈ ಕೆಳಕಂಡ ಕಾರಣಗಳಿಗಾಗಿ:

## ಕಾರಣಗಳು

5. ಅಂಶ ಸಂಖ್ಯೆ **1:** ಫಿರ್ಯಾದಿದಾರರು ಕೊಟ್ಟ ದೂರಿನಂತೆ ಹಾರೋಹಳ್ಳಿ ಪೊಲೀಸ್ ಠಾಣಾಧಿಕಾರಿಗಳು ಅರ್ಜಿದಾರರ ವಿರುದ್ಧ ಹಾರೋಹಳ್ಳಿ ಪೊಲೀಸ್ ಠಾಣಾ ಅಪರಾಧ ಸಂಖ್ಯೆ 302/2025 ಎನ್.ಡಿ.ಪಿ.ಎಸ್ ಕಾನೂನು ಕಲಂ.8(ಬಿ), 20(ಎ)(ಐ)ರ ಅಡಿಯಲ್ಲಿ ಕೇಸು ದಾಖಲು ಮಾಡಿರುತ್ತಾರೆ.

6. ಪ್ರಕರಣದ ಸಂಕ್ಷಿಪ್ತ ಸಾರಾಂಶ**:** ದೂರನ್ನು ಪರಿಶೀಲಿಸಲಾಗಿ, ಹಾರೋಹಳ್ಳಿ ತಾಲ್ಲೂಕು, ಮರಳವಾಡಿ ಹೋಬಳಿ, ತೋಕಸಂದ್ರ ಗ್ರಾಮದ ಚಾಸಾ.7 ರವರಿಗೆ ಸೇರಿದ ಸರ್ವೆ ನಂ.98/5 ರಲ್ಲಿನ ಜಮೀನಿನಲ್ಲಿ ಅಕ್ರಮವಾಗಿ ಗಾಂಜಾ ಸೊಪ್ಪಿನ ಗಿಡಗಳನ್ನು ಬೆಳೆದಿರುವ ಬಗ್ಗೆ ಚಾಸಾ.11 ರವರಿಗೆ ಮಾಹಿತಿ ಬಂದ ಮೇರೆಗೆ, ಸದರಿ ಮಾಹಿತಿಯನ್ನು ಚಾಸಾ.1 ರವರು ಮೇಲಾಧಿಕಾರಿಯವರಿಗೆ ತಿಳಿಸಿ ಅನುಮತಿಯನ್ನು ಪಡೆದುಕೊಂಡು ಚಾಸಾ.2 ರಿಂದ ಚಾಸಾ.4

ಮತ್ತು ಚಾಸಾ.11 ರಿಂದ ಚಾಸಾ.18 ರವರ ಜೊತೆ ಸ್ಥಳಕ್ಕೆ ಭೇಟಿ ನೀಡಿ ದಾಳಿ ಮಾಡಿದಾಗ ಸದರಿ ಜಮೀನನ್ನು ನೋಡಿಕೊಳ್ಳುತ್ತಿದ್ದ ಅರ್ಜಿದಾರ ಯಾವುದೇ ಪರವಾನಿಗೆ ಇಲ್ಲದೇ ಅಕ್ರಮವಾಗಿ 6 ಹಸಿ ಗಾಂಜಾ ಸೊಪ್ಪಿನ ಗಿಡಗಳನ್ನು ತೊಗರಿ ಗಿಡಗಳ ಮಧ್ಯೆ ಯಾರಿಗೂ ತಿಳಿಯದಂತೆ ಬೆಳೆದಿದ್ದು, ಅವುಗಳನ್ನು ಬುಡಸಮೇತ ಕಿತ್ತು ಬಳಿ ಚೀಲಗಳಲ್ಲಿ ಹಾಕಿ ತೂಕ ಮಾಡಿದಾಗ ಒಟ್ಟು 5 ಕೆಜಿ 320 ಗ್ರಾಂ ತೂಕವಿದ್ದು, ಅವುಗಳನ್ನು ಮಹಜರ ಮಾಡಿ ಅಮಾನತ್ತುಪಡಿಸಿಕೊಂಡಿರುತ್ತಾರೆ. ನಂತರ ಎದುರುದಾರ ಪೊಲೀಸರು ಆರೋಪಿಯ ವಿರುದ್ಧ ದೋಷರೋಪಣಾ ಪಟ್ಟಿ ಸಲ್ಲಿಸಿರುತ್ತಾರೆ.

7. ಅರ್ಜಿದಾರ ಮೇಲೆ ಇರುವಂತ ಆಪಾದನೆ ಎನ್.ಡಿ.ಪಿ.ಎಸ್. ಕಾನೂನು ಕಲಂ.20(a)(i) ಜಾಮೀನು ರಹಿತವಾದ್ದಂತಹ ಆಪಾದನೆ ಆಗಿದ್ದು, ಮಾನ್ಯ ಜಿಲ್ಲಾ ನ್ಯಾಯಾಲಯದಲ್ಲಿ ನಡೆಯತಕ್ಕ ಪ್ರಕರಣಗಳು ಆಗಿರುತ್ತದೆ.

8. ದೋಷರೋಪಣಾ ಪಟ್ಟಿ ಪರಿಶೀಲಿಸಿದಾಗ, ಎದುರುದಾರರ ಪೊಲೀಸರು ತನಿಖೆ ಪೂರ್ಣಗೊಳಿಸಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದು, ನ್ಯಾಯಾಲಯದಲ್ಲಿ ವಿಶೇಷ ಪ್ರಕರಣ ಸಂಖ್ಯೆ 9/2026 ಅಂತಾ ದಾಖಲಾಗಿರುತ್ತದೆ. ಅರ್ಜಿದಾರ ದಿನಾಂಕ 20.11.2025 ರಿಂದ ನ್ಯಾಯಾಂಗ ಬಂಧನದಲ್ಲಿರುತ್ತಾನೆ. 6 ಗಾಂಜಾ ಹಸಿ ಗಿಡಗಳನ್ನು ಕಿತ್ತಿರುವುದರಿಂದ ಪ್ರತ್ಯೇಕವಾಗಿ ತೂಕ ಮಾಡಿಲ್ಲದೇ ಇರುವುದರಿಂದ ಕಡ್ಡಾಯ ನಿಯಮಗಳನ್ನು ಪಾಲಿಸಿಲ್ಲದೇ ಇರುವುದರಿಂದ ಇಂಥ ಸಂದರ್ಭದಲ್ಲಿ ಅರ್ಜಿದಾರರು ಷರತ್ತಿನ ಆಧಾರದ ಮೇಲೆ ಜಾಮೀನು ಪಡೆಯಲು ಅರ್ಹರಿರುತ್ತಾರೆ.

9. ಅರ್ಜಿದಾರ ನ್ಯಾಯಾಲಯಕ್ಕೆ ಸೂಕ್ತ ಜಾಮೀನು ನೀಡಲು ತಯಾರಿದ್ದು, ಬೆಂಗಳೂರು ದಕ್ಷಿಣ ಜಿಲ್ಲಾ ರಹವಾಸಿಯಾಗಿದ್ದು, ಸದರಿ ಅರ್ಜಿದಾರರು ಚರ ಮತ್ತು ಸ್ಥಿರ ಆಸ್ತಿಗಳನ್ನು ಹೊಂದಿದ್ದು ತಲೆ ಮರೆಸಿಕೊಳ್ಳುವ ಸಾಧ್ಯತೆ ಇರುವುದಿಲ್ಲ. ಇಂತಹ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ಅರ್ಜಿದಾರರಿಗೆ ಷರತ್ತಿನ ಆಧಾರದ ಮೇಲೆ ಜಾಮೀನನ್ನು ಮಂಜೂರು ಮಾಡುವುದು ಸೂಕ್ತ ಅಂತ ನ್ಯಾಯಾಲಯಕ್ಕೆ ಕಂಡು ಬಂದಿರುವುದರಿಂದ ಸದರಿ ಅಂಶ ಸಂಖ್ಯೆ ***1*** ನ್ನು ಸಕಾರಾತ್ಮಕವಾಗಿ ಉತ್ತರಿಸಲಾಯಿತು.

10. <u>ಅಂಶ ಸಂಖ್ಯೆ **2**</u>**:** ಅಂಶ ಸಂಖ್ಯೆ 1 ಕ್ಕೆ ನೀಡಿದ ಕಾರಣ ಹಾಗೂ ಉತ್ತರಗಳಿಗಾಗಿ ಈ ಕೆಳಕಂಡಂತೆ ಆದೇಶ:

## <u>ಆದೇಶ</u>

ಅರ್ಜಿದಾರರ ಪರ ವಕೀಲರು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ 483 ರ ಅಡಿಯಲ್ಲಿ ಸಲ್ಲಿಸಿದ ಜಾಮೀನು ಅರ್ಜಿಯನ್ನು ಪುರಸ್ಕರಿಸಲಾಯಿತು.

ಅರ್ಜಿದಾರ ಸಂಬಂಧಪಟ್ಟ ನ್ಯಾಯಾಲಯಕ್ಕೆ/ ದಂಡಾಧಿಕಾರಿಗಳ ನ್ಯಾಯಾಲಯಕ್ಕೆ ರೂ.50,000/- (ರೂ.ಐವತ್ತು ಸಾವಿರ ರೂಪಾಯಿ) ಸ್ವ ಮುಚ್ಚಳಿಕೆ ಪತ್ರ ಹಾಗೂ ಅಷ್ಟೇ ಮೊತ್ತದ ಒಬ್ಬ ಸೂಕ್ತ ಜಾಮೀನನ್ನು ನೀಡತಕ್ಕದ್ದು ಹಾಗೂ ಅರ್ಜಿದಾರ ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು.

### <u>ಷರತ್ತುಗಳು</u>

1. ಅರ್ಜಿದಾರರು ತಮ್ಮ ವಿಳಾಸಕ್ಕೆ ಸಂಬಂಧಪಟ್ಟಂತೆ ಚುನಾವಣಾ ಗುರುತಿನ ಚೀಟಿ/ಆಧಾರ್ ಕಾರ್ಡ್ ಹಾಗೂ ಇತರೆ ದಾಖಲೆಯನ್ನು ಹಾಜರುಪಡಿಸತಕ್ಕದ್ದು.
2. ಅರ್ಜಿದಾರರು ಅಭಿಯೋಜಕ ಪಕ್ಷದ ಸಾಕ್ಷಿಗಳನ್ನು ಯಾವುದೇ ರೀತಿಯಿಂದಲೂ ಹೆದರಿಸತಕ್ಕದ್ದಲ್ಲ.

3. ಅರ್ಜಿದಾರರು ಪುನಃ ಇಂತಹ ಪ್ರಕರಣಗಳಲ್ಲಿ ಭಾಗಿಯಾಗತಕ್ಕದ್ದಲ್ಲ.

4. ಈ ಮೇಲ್ಕಂಡ ಷರತ್ತುಗಳನ್ನು ಪೂರೈಸಿದ ನಂತರ ಅರ್ಜಿದಾರರ ಬಿಡುಗಡೆ ಮಾಡಲು ಸಂಬಂಧಪಟ್ಟಂತಹ ಬಂದೀಖಾನೆ ಅಧೀಕ್ಷಕರಿಗೆ ಮಾಹಿತಿ ಕಳಿಸಲು ಆದೇಶಿಸಲಾಯಿತು.

ಈ ಮೇಲ್ಕಂಡ ಷರತ್ತುಗಳನ್ನು ಉಲ್ಲಂಘನೆ ಮಾಡಿದಲ್ಲಿ ತಕ್ಷಣವೇ ಅರ್ಜಿದಾರರ ಜಾಮೀನು ವಜಾ ಆಗತಕ್ಕದ್ದು ಅಂತ ಆದೇಶ ಮಾಡಲಾಯಿತು.

*(ಈ ಆದೇಶದ ಉಕ್ತಲೇಖನವನ್ನು ಶೀಘ್ರಲಿಪಿಗಾರ್ತಿ ಗ್ರೇಡ್ -III ರವರಿಗೆ ನೇರವಾಗಿ ಗಣಕಯಂತ್ರ ಪರದೆಯ ಮೇಲೆ ನೀಡಿದ್ದು, ನಂತರ ಅವರು ಗಣಕೀಕರಿಸಿದ್ದನ್ನು ಓದಿ, ತಿದ್ದಿ ಇದೇ ದಿನಾಂಕ **23** ನೇ ಮಾರ್ಚ್ ಮಾಹೆ **2026** ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು).*

(ಎಂ.ಹೆಚ್. ಅಣ್ಣಯ್ಯನವರ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಮನಗರ.

*** ***
NGR